## ಹಿರಿಯ ಸಿವಿಲ್ ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ಹಿರಿಯೂರು

## ಸಿ.ಸಿ ನಂ.1187/2021

| | | | |
|---|---|---|---|
| ಸಾಕ್ಷಿದಾರರ ಹೆಸರು | - | ರಂಗಪ್ಪ | ಸಿಡಬ್ಲ್ಯೂ-5 |
| ತಂದೆಯ ಹೆಸರು | - | ಗೋವಿಂದಪ್ಪ | ಪಿಡಬ್ಲ್ಯೂ-4 |
| ವಯಸ್ಸು | - | 49 ವರ್ಷ | |
| ಉದ್ಯೋಗ | - | ವ್ಯವಸಾಯ | |
| ವಾಸ | - | ಸೀಗೆಹಟ್ಟಿ | |

**ದಿನಾಂಕ:29.07.2024 ರಂದು ಸಾಕ್ಷಿಯನ್ನು ಕರೆಸಲಾಯಿತು ಮತ್ತು ಪ್ರಮಾಣ ವಚನ ಬೋಧಿಸಲಾಯಿತು.**

**ಸಾಕ್ಷಿದಾರರ ಮುಖ್ಯ ವಿಚಾರಣೆ: ಮಾನ್ಯ ಸ ಸ ಅ ರವರಿಂದ**

ಚಾಸಾ.1 ಮತ್ತು 4 ನನಗೆ ಪರಿಚಯವಿಲ್ಲ. ಸಾಕ್ಷಿಗೆ ನಿಪಿ-3 ಮತ್ತು 4 ನ್ನು ತೋರಿಸಲಾಗಿ ಅದರಲ್ಲಿರುವ ಸಹಿ ಒಪ್ಪಿದ್ದರಿಂದ ಸಹಿಗಳನ್ನು ನಿಪಿ-3(ಸಿ), 4(ಸಿ) ಎಂದು ಗುರುತಿಸಲಾಯಿತು. 2 ವರ್ಷಗಳ ಹಿಂದೆ ಎರಡು ದಾಖಲೆಗಳಿಗೆ ಯಲ್ಲದೆ ಕರೆ ಗ್ರಾಮದಲ್ಲಿ ಸಹಿ ಮಾಡಿದ್ದೇನೆ. ಯಾವ ಕಾರಣಕ್ಕೆ ಸಹಿ ಮಾಡಿದ್ದೇನೆ ಎಂದು ಗೊತ್ತಿಲ್ಲ. ನನ್ನ ಸಮಕ್ಷಮ ಪೊಲೀಸರು ಯಾವುದೇ ವಾಹನ ಅಮಾನತ್ತು ಪಡಿಸಿಕೊಂಡಿಲ್ಲ. ನನ್ನ ಜೊತೆ ಸದರಿ ದಾಖಲೆಗಳಿಗೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ನಿಪಿ-3 ಮತ್ತು 4 ರಲ್ಲಿ ಏನು ಬರೆಯಲಾಗಿದೆ ಎಂದು ಗೊತ್ತಿಲ್ಲ. ಅವುಗಳನ್ನು ಪೊಲೀಸರು ಓದಿ ಹೇಳಿಲ್ಲ. ಸಾಕ್ಷಿ ನಿಪಿ-5 ರ ಪೋಟೋವನ್ನು ನೋಡಿ ಗುರುತಿಸಿದ್ದಾರೆ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಮತ್ತು ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಸ ಸ ಅಭಿಯೋಜಕರು ಕೋರಿದ್ದರಿಂದ ಅನುಮತಿ ನೀಡಲಾಯಿತು)

**ಪಾಟೀ ಸವಾಲು: ಮಾನ್ಯ ಸ ಸ ಅ ರವರಿಂದ:**

ದಿ:03.10.2023 ರಂದು ಯಲ್ಲದಕೆರೆ ಬಸ್ ನಿಲ್ದಾಣದ ಬಳಿ ಅಪಘಾತಕ್ಕೆ ಸಂಬಂಧಪಟ್ಟಂತೆ ಪೊಲೀಸರು ಮಹಜರ್ ಮಾಡಿ ಎಪಿ.39 ಬಿ ಜಡ್ 4826 ನ್ನು

ವಶಪಡಿಸಿಕೊಂಡು ನನ್ನ ಸಹಿ ಪಡೆದಿದ್ದಾರೆ ಎಂದರೆ ಸರಿಯಲ್ಲ. ಮಹಜರ್ ಮಾಡುವಾಗ ನಿಪಿ–5 ನ್ನು ತೆಗೆಸಿದ್ದಾರೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ನಿಪಿ–3 ಮತ್ತು 4 ನ್ನು ತಯಾರಿಸಿದ್ದಾರೆ ಎಂದರೆ ಸರಿಯಲ್ಲ. ಎಲ್ಲಾ ವಿಚಾರ ನನಗೆ ಗೊತ್ತಿದ್ದರೂ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು ಆರೋಪಿತರ ಪರ ಶ್ರೀ ಆರ್ ಟಿ ಎಸ್ ವಕೀಲರಿಂದ–ಏನೂ ಇಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯು ಹೇಳಿದ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು )

ಓ ಹೇ ಕೇ ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ ಎಂ ಎಫ್ ಸಿ , ಹಿರಿಯೂರು